ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮದ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

774 (831) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2012-13ನೇ ಸಾಲಿನವರೆಗೆ ರಾಜ್ಯಾದ್ಯಂತ ಸರ್ಕಾರಿ ಶಾಲೆಗಳ ಮೂಲ ಸೌಕರ್ಯ ಒದಗಿಸಲು ಸರ್ವ ಶಿಕ್ಷಣ ಅಭಿಯಾನದಡಿ ಅನುದಾನ ಒದಗಿಸಲಾಗುತ್ತಿದ್ದು, ಅಭಿಯಾನದ ಅವಧಿ ಮುಗಿದ ನಂತರದ ದಿನಗಳಲ್ಲಿ ಸರ್ಕಾರಿ ಶಾಲೆಗಳ ದುರಸ್ಥಿ/ಅಭಿವೃದ್ಧಿಗೆ ಅನುದಾನದ ತೀವ್ರತರವಾದ ಕೊರತೆ ಉಂಟಾಗಿದ್ದು, ಶಾಲೆಗಳ ಸ್ಥಿತಿ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಸರ್ವ ಶಿಕ್ಷಣ ಅಭಿಯಾನದ ಬದಲಿಗೆ ಯಾವ ಯೋಜನೆಯಿಂದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅನುದಾನ ಒದಗಿಸಲಾಗುತ್ತಿದೆ? (ವಿವರ ನೀಡುವುದು)